# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ, ದಿನಾಂಕ:16ನೇ ಸೆಪ್ಟೆಂಬರ್, 2022**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

### 02. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಅಣ್ಣೆಪುರ ಗ್ರಾಮದ ಸರ್ವೆ ನಂ.18ರ ವಾರ್ಡ್ ನಂ.143 ರಲ್ಲಿ ಹಾಪ್ ಕಾಮ್ಸ್ ಸಂಸ್ಥೆಯವರು 2.08 ಎಕರೆ ಜಮೀನನ್ನು ಆಕ್ರಮಿಸಿಕೊಂಡಿರುವ ಕುರಿತು ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

02. **ಶ್ರೀ ಸಲೀಂ ಅಹಮದ್** ಅವರು ಪ್ರಮುಖ ಖಾಯಿಲೆಗಳಿಗೆ ಅಗತ್ಯವಾಗಿ ಬೇಕಾಗಿರುವ ಔಷಧಿಗಳು ಜನೌಷಧ ಕೇಂದ್ರಗಳಲ್ಲಿ ಲಭ್ಯವಿಲ್ಲದಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

03. **ಶ್ರೀ ಸಿ.ಎನ್. ಮಂಜೇಗೌಡ** ಅವರು ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ಖಾಯಂ ನೌಕರರಿಗೆ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

04. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಚಿಂತಾಮಣಿ ತಾಲ್ಲೂಕು ಕಸಬಾ ಹೋಬಳಿ ಮುನಗನಹಳ್ಳಿಯ ಸರ್ವೆ ನಂ.36/2ರ ಕೆರೆ-ಕಟ್ಟೆ ಮೊದಲಾದ ಜಲಕಾಯಗಳಲ್ಲಿನ ಹಾಗೂ ನಿರ್ಭಂಧಿತ ಪ್ರದೇಶದಲ್ಲಿನ ಅಕ್ರಮ ಕಟ್ಟಡ/ಸಂರಚನೆಗಳನ್ನು ತೆರವುಗೊಳಿಸುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

### 03. ನಿಯಮ 330ರ ಮೇರೆಗೆ

01. **ಶ್ರೀ ಮರಿತಿಬ್ಬೇಗೌಡ** ಅವರು ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೇ ನಂ.11ರಲ್ಲಿ ಜಿ.ಟಿ.ಬಿ. ಕ್ರಷರ್ಸ್, ಇವರು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳೊಂದಿಗೆ ಶಾಮೀಲಾಗಿ ಕಾನೂನು ಬಾಹಿರವಾಗಿ ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಪಿ.ಆರ್ ರಮೇಶ್** ಅವರು ಕುಣಿಗಲ್ ತಾಲ್ಲೂಕಿನ ವೈ. ಹೊಸಹಳ್ಳಿಯಿಂದ ಹಂಪಾಪುರ ಮಧ್ಯೆ ಸುಮಾರು 600 ಮೀಟರ್ ಉದ್ದದ ಸಂಪರ್ಕ ಸೇತುವೆಯನ್ನು ನಿರ್ಮಾಣ ಮಾಡುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗ ಜಿಲ್ಲೆಯಲ್ಲಿ ಉತ್ಪಾದನೆಯಾಗುವ ಅಡಿಕೆ ಮಾರಾಟದ ಒಟ್ಟು ವಹಿವಾಟಿನ ತೆರಿಗೆ ಆದಾಯದ ಬಗ್ಗೆ ಗೊಂದಲವಿರುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಎಂ.ನಾಗರಾಜು ಹಾಗೂ ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರುಗಳು ದಿನಗೂಲಿ ಕಾರ್ಮಿಕರ ಆತ್ಮಹತ್ಯೆಗಳನ್ನು ತಡೆಗಟ್ಟಲು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.

## 04. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ

**ಶ್ರೀಯುತರುಗಳಾದ;–**

| | |
|---|---|
| ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಮತ್ತು ಬಿ.ಎಂ. ಫಾರೂಖ್ ಹಾಗೂ ಇತರರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದಾಗಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳು ಪ್ರವಾಹ ಭೀತಿಯನ್ನು ಎದುರಿಸುತ್ತಿದ್ದು, ರಾಜ್ಯದ ಹೆದ್ದಾರಿ ಮತ್ತು ರಸ್ತೆಗಳು ಕೊಚ್ಚಿಹೋಗಿದ್ದು, ಕೆರೆ ಕೋಡಿಗಳು ಒಡೆದು ಅಪಾರ ಹಾನಿಯುಂಟಾಗಿ ಜನರು ಸಂಕಷ್ಟಕ್ಕೆ ಒಳಗಾಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**